

ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ ಅವರು ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಅವರ ಬೆಂಗಳೂರು ಕಚೇರಿಗೆ ಆಗಮಿಸಿ ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಲ್ಲಿರುವ ಸಮಸ್ಯೆಗಳ ಕುರಿತು ಚರ್ಚಿಸಿದರು. ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

# ಸಭಾಪತಿ ಬಸವರಾಜ ಹೊರಟ್ಟಿ ಅವರೊಂದಿಗೆ ಉನ್ನತ ಶಿಕ್ಷಣ ಸಚಿವರ ಸಮಾಲೋಚನೆ



ಗದಗ, 10. ಗೌರವಾನ್ವಿತ ಸಭಾಪತಿಗಳಾದ ಬಸವರಾಜ್ ಹೊರಟ್ಟಿ ಅವರೊಂದಿಗೆ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ್ ಅವರು ಇಂದು ಸಭಾಪತಿಗಳ ಕಚೇರಿಗೆ ಆಗಮಿಸಿ ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಲ್ಲಿರುವ ಸಮಸ್ಯೆಗಳ ಕುರಿತು ಹೊರಟ್ಟಿ ಅವರೊಂದಿಗೆ ಸುಧೀರ್ಘವಾಗಿ ಚರ್ಚಿಸಿದರು.

ಕಾಲೇಜು ಹಾಗೂ ವಿಶ್ವ ವಿದ್ಯಾಲಯಗಳ ಉಪನ್ಯಾಸಕರ ಹಾಗೂ ಅತಿಥಿ ಉಪನ್ಯಾಸಕರ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಇರುವ ಬೋಧಕ ಬೋಧಕೇತರ ಸಿಬ್ಬಂದಿಗಳ ಕೊರತೆ ಕುರಿತು ಚರ್ಚಿಸಿದರು. ಕುಸಿಯುತ್ತಿರುವ ಉನ್ನತ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ಕುರಿತು ಹಲವಾರು ಮಹತ್ವದ ಸಂಗತಿಗಳ ಕುರಿತು ಸಮಾಲೋಚನೆ ಮಾಡಿದರು. ನೂತನ ಶಿಕ್ಷಣದ ಕುರಿತು ತಮ್ಮದೇ ಆದ ವಿಚಾರವನ್ನು ಸಭಾಪತಿಗಳೊಂದಿಗೆ ಸಚಿವರು ಹಂಚಿಕೊಂಡರು.

ಸಭಾಪತಿ ಬಸವರಾಜ ಹೊರಟ್ಟಿಯವರ ಸುಧೀರ್ಘ ನಾಲ್ಕು ದಶಕಗಳ ಅನುಭವ ಕುರಿತು ಸಭಾಪತಿ ಬಸವರಾಜ್ ಹೊರಟ್ಟಿ ಅವರಿಂದ ಕೇಳಿ ತಿಳಿದುಕೊಂಡು ಸಂತೋಷ ವ್ಯಕ್ತಪಡಿಸಿದರು. ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾದ ಕುರಿತು ಮಾಹಿತಿ ಪಡೆದು ಆಶ್ಚರ್ಯ ವ್ಯಕ್ತಪಡಿಸಿದ ಸಚಿವರು ತಮ್ಮ ಅನುಭವ ಮಾರ್ಗದರ್ಶನ ಸದಾ ನನಗೆ ಇರಲಿ ಎಂದು ಸಭಾಪತಿಗಳಲ್ಲಿ ವಿನಂತಿಸಿದರು.

ಈ ಸಂದರ್ಭದಲ್ಲಿ ವಿಧಾನ ಪ್ರಶಸ್ತಿ ಸದಸ್ಯರಾದ ಶರವನ್ ವಿಧಾನ ಪರಿಷತ್ತಿನ ಸಭಾಪತಿಯವರು ವಿಶೇಷ ಅಧಿಕಾರಿಗಳಾದ ಶ್ರೀಮತಿ ಶೈಲಾ ಕೇ.ಡಿ ಸಭಾಪತಿಯವರ ಕರ್ತವ್ಯ ಅಧಿಕಾರಿಗಳಾದ ಡಾ. ಮಹೇಶ್ ವಾ ಳ್ವೆಕರ್ ಸೇರಿದಂತೆ ಪರಿಷತ್ತಿನ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.

# ಉನ್ನತ ಶಿಕ್ಷಣ ಕ್ಷೇತ್ರ ಸಮಸ್ಯೆ– ಸಚಿವರ ಚರ್ಚೆ

**ಗದಗ:** ಗೌರವಾನ್ವಿತ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರೊಂದಿಗೆ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ್ ಅವರು ಬೆಂಗಳೂರಿನಲ್ಲಿ ಸಭಾಪತಿಗಳ ಕಚೇರಿಗೆ ಆಗಮಿಸಿ ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಲ್ಲಿರುವ ಸಮಸ್ಯೆಗಳ ಕುರಿತು ಹೊರಟ್ಟಿ ಅವರೊಂದಿಗೆ ಸುದೀರ್ಘವಾಗಿ ಚರ್ಚಿಸಿದರು.

ಕಾಲೇಜು ಹಾಗೂ ವಿಶ್ವವಿದ್ಯಾಲಯಗಳ ಉಪನ್ಯಾಸಕರ ಹಾಗೂ ಅತಿಥಿ ಉಪನ್ಯಾಸಕರ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಇರುವ ಬೋಧಕ– ಬೋಧಕೇತರ ಸಿಬ್ಬಂದಿಗಳ ಕೊರತೆ ಕುರಿತು ಚರ್ಚಿಸಿದರು. ಕುಸಿಯುತ್ತಿರುವ ಉನ್ನತ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ಕುರಿತು ಹಲವಾರು ಮಹತ್ವದ ಸಂಗತಿಗಳ ಕುರಿತು ಸಮಾಲೋಚನೆ ಮಾಡಿದರು. ನೂತನ ಶಿಕ್ಷಣದ ಕುರಿತು ತಮ್ಮದೇ ಆದ ವಿಚಾರವನ್ನು ಸಭಾಪತಿಗಳೊಂದಿಗೆ ಸಚಿವರು ಹಂಚಿಕೊಂಡರು.

ಸಭಾಪತಿ ಬಸವರಾಜ ಹೊರಟ್ಟಿಯವರ ಸುದೀರ್ಘ ನಾಲ್ಕು ದಶಕಗಳ ಅನುಭವ ಕುರಿತು ಸಭಾಪತಿ ಬಸವರಾಜ ಹೊರಟ್ಟಿ ಅವರಿಂದ ಕೇಳಿ ತಿಳಿದುಕೊಂಡು ಸಂತೋಷ ವ್ಯಕ್ತಪಡಿಸಿದರು. ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾದ ಕುರಿತು ಮಾಹಿತಿ ಪಡೆದು ಆಶ್ಚರ್ಯ ವ್ಯಕ್ತಪಡಿಸಿದ ಸಚಿವರು, ತಮ್ಮ ಅನುಭವ, ಮಾರ್ಗದರ್ಶನ ಸದಾ ನನಗೆ ಇರಲಿ ಎಂದು ಸಭಾಪತಿಗಳಲ್ಲಿ ವಿನಂತಿಸಿದರು

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಶರವಣ, ಸಭಾಪತಿಯವರ ವಿಶೇಷ ಅಧಿಕಾರಿ ಶೈಲಾ ಕೆ.ಡಿ, ಕರ್ತವ್ಯ ಅಧಿಕಾರಿಗಳಾದ ಡಾ. ಮಹೇಶ್ ವಾಳ್ವೇಕರ್ ಸೇರಿದಂತೆ ಪರಿಷತ್ತಿನ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು ಎಂದು ಡಾ. ಬಸವರಾಜ ಧಾರವಾಡ ತಿಳಿಸಿದ್ದಾರೆ.



ಬೆಂಗಳೂರಿನಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರೊಂದಿಗೆ ಉನ್ನತ ಶಿಕ್ಷಣ ಸಚಿವರು ಸಮಾಲೋಚನೆ ನಡೆಸಿದರು.

# ಸಭಾಪತಿ ಬಸವರಾಜ್ ಹೊರಟ್ಟಿ ಅವರೊಂದಿಗೆ ಉನ್ನತ ಶಿಕ್ಷಣ ಸಚಿವರು ಸಮಾಲೋಚನೆ



**ಗದಗ ಸಂಜೆ ವಾರ್ತೆ**

ಗದಗ : ಗೌರವಾನ್ವಿತ ಸಭಾಪತಿಗಳಾದ ಬಸವರಾಜ್ ಹೊರಟ್ಟಿ ಅವರೊಂದಿಗೆ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ ಸಿ .ಸುಧಾಕರ್ ಅವರು ಇಂದು ಸಭಾಪತಿಗಳ ಕಚೇರಿಗೆ ಆಗಮಿಸಿ ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಲ್ಲಿರುವ ಸಮಸ್ಯೆಗಳ ಕುರಿತು ಹೊರಟ್ಟಿ ಅವರೊಂದಿಗೆ ಸುಧೀರ್ಘವಾಗಿ ಚರ್ಚಿಸಿದರು. ಕಾಲೇಜು ಹಾಗೂ ವಿಶ್ವವಿದ್ಯಾಲಯಗಳ ಉಪನ್ಯಾಸಕರ ಹಾಗೂ ಅತಿಥಿ ಉಪನ್ಯಾಸಕರ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಇರುವ ಬೋಧಕ ಬೋಧಕೇತರ ಸಿಬ್ಬಂದಿಗಳ ಕೊರತೆ ಕುರಿತು ಚರ್ಚಿಸಿದರು. ಖುಷಿಯುತ್ತಿರುವ ಉನ್ನತ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ಕುರಿತು ಹಲವಾರು ಮಹತ್ವದ ಸಂಗತಿಗಳ ಕುರಿತು ಸಮಾಲೋಚನೆ ಮಾಡಿದರು. ನೂತನ ಶಿಕ್ಷಣದ ಕುರಿತು ತಮ್ಮದೇ ಆದ ವಿಚಾರವನ್ನು ಸಭಾಪತಿಗಳೊಂದಿಗೆ ಸಚಿವರು ಹಂಚಿಕೊಂಡರು. ಸಭಾಪತಿ ಬಸವರಾಜ್ ಹೊರಟ್ಟಿಯವರ ಸುಧೀರ್ಘ ನಾಲ್ಕು ದಶಕಗಳ ಅನುಭವ ಕುರಿತು ಸಭಾಪತಿ ಬಸವರಾಜ್ ಹೊರಟ್ಟಿ ಅವರಿಂದ ಕೇಳಿ ತಿಳಿದುಕೊಂಡು ಸಂತೋಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಿಧಾನ ಪ್ರಶಸ್ತಿ ಸದಸ್ಯರಾದ ಶರಮ್ ವಿಧಾನ ಪರಿಷತ್ತಿನ ಸಭಾಪತಿಯವರು ವಿಶೇಷ ಅಧಿಕಾರಿಗಳಾದ ಶ್ರೀಮತಿ ಶೈಲಾ ಕೇ.ಡಿ ಸಭಾಪತಿಯವರ ಕರ್ತವ್ಯ ಅಧಿಕಾರಿಗಳಾದ ಡಾ. ಮಹೇಶ್ ವಾ ಕ್ಷೀರ್ ಸೇರಿದಂತೆ ಪರಿಷತ್ತಿನ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.

# ಉನ್ನತ ಶಿಕ್ಷಣ ಇಲಾಖೆಯಲ್ಲಿರುವ ಸಮಸ್ಯೆಗಳ ಕುರಿತು ಚರ್ಚೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಭಾಪತಿ ಬಸವರಾಜ ಹೊರಟ್ಟಿ ಅವರೊಂದಿಗೆ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ ಸಿ ಸುಧಾಕರ್ ಅವರು ಸೋಮವಾರ ಸಭಾಪತಿಗಳ ಕಚೇರಿಗೆ ಆಗಮಿಸಿ ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಲ್ಲಿರುವ ಸಮಸ್ಯೆಗಳ ಕುರಿತು ಹೊರಟ್ಟಿ ಅವರೊಂದಿಗೆ ಸುದೀರ್ಘವಾಗಿ ಚರ್ಚಿಸಿದರು.

ಕಾಲೇಜು ಹಾಗೂ ವಿಶ್ವವಿದ್ಯಾಲಯಗಳ ಉಪನ್ಯಾಸಕರ ಹಾಗೂ ಅತಿಥಿ ಉಪನ್ಯಾಸಕರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಇರುವ ಬೋಧಕ–ಬೋಧಕೇತರ ಸಿಬ್ಬಂದಿಗಳ ಕೊರತೆಯ ಕುರಿತು ಚರ್ಚಿಸಿದರು. ಸಭಾಪತಿ ಬಸವರಾಜ ಹೊರಟ್ಟಿಯವರು ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾದ ಕುರಿತು ಮಾಹಿತಿ ಪಡೆದ ಸಚಿವರು ಆಶ್ಚರ್ಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಿ ಪ ಸದಸ್ಯರಾದ ಶರವಣ್, ಸಭಾಪತಿಯವರ ವಿಶೇಷ ಅಧಿಕಾರಿಗಳಾದ ಶೈಲಾ ಕೆ ಡಿ, ಕರ್ತವ್ಯಾಧಿಕಾರಿಗಳಾದ ಡಾ. ಮಹೇಶ್ ವಾಳ್ವೇಕರ್ ಸೇರಿದಂತೆ ಪರಿಷತ್ತಿನ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.